ಇ) ಈ ರಸ್ತೆಯಿಂದ ಸಂಗ್ರಹವಾದ ಹಣದಿಂದ ರಸ್ತೆ ಅಭಿವೃದ್ಧಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ? (ವಿವರ ನೀಡುವುದು)

ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು)

ಅ) ಭೂಸಾರಿಗೆ ಮಂತ್ರಾಲಯದ ಕಾಯ್ದೆ 1956 (48/1956)ರ ಅನ್ವಯ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸುಂಕ ವಸೂಲಾತಿ ಮಾಡಲು ಕೇಂದ್ರ ಸರ್ಕಾರದ ಪತ್ರಾಂಕಿತ ಅಧಿಸೂಚನೆಯಾಗದೆ (Government of India Gazette Notification) ಸುಂಕ ವಸೂಲಾತಿ ಮಾಡಲು ಬರುವುದಿಲ್ಲ. ಹುಬ್ಬಳ್ಳಿ ಅಂಕೋಲ ಬಾಳೇಗುಳಿ ಮತ್ತು ಕಾರವಾರ ರಸ್ತೆಯಲ್ಲಿ ಸಂಚರಿಸುವ ವಾಹನಗಳಿಂದ ಸುಂಕ ಸಂಗ್ರಹ ಮಾಡುವ ಬಗ್ಗೆ ಭೂಸಾರಿಗೆ ಮಂತ್ರಾಲಯದಿಂದ ಯಾವುದೇ ನಿರ್ದೇಶನವಿರುವುದಿಲ್ಲ. ಆದ್ದರಿಂದ ಈ ರಸ್ತೆಯಲ್ಲಿ ಸುಂಕ ಸಂಗ್ರಹ ಮಾಡಿರುವುದಿಲ್ಲ.

ಆ) ಕಬ್ಬಿಣದ ಅದಿರು, ಭಾರವಾದ ಕಲ್ಲುಗಳು ಹಾಗೂ ಇತರ ಗಣಿ ವಸ್ತುಗಳನ್ನು ಸಾಗಿಸುವ ಟ್ರಕ್ಕಿನಿಂದ ರೀತಿಯ ತೆರಿಗೆ/ಸೆಸ್ಸುಗಳನ್ನು ಭೂಸಾರಿಗೆ ಮಂತ್ರಾಲಯದ ಕಾಯ್ದೆ, 1956 (48 of 1956)ರ ಅನ್ವಯ ಸಂಗ್ರಹಿಸಲು ಬರುವುದಿಲ್ಲ. ಆದ್ದರಿಂದ ಈ ರಸ್ತೆಯಲ್ಲಿ ರಾಷ್ಟ್ರೀಯ ಹೆದ್ದಾರಿ ವಲಯದಿಂದ ಯಾವುದೇ ಸುಂಕವನ್ನು ವಸೂಲಾತಿಯನ್ನು ಮಾಡುತ್ತಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿಯಮ ಉಲ್ಲಂಘಿಸಿ ನಿವೇಶನ ಹಂಚಿಕೆ ಮಾಡಿರುವುದು

397 (876) ಶ್ರೀ ಜಯಚಂದ್ರ ಟಿ.ಬಿ. (ಶಿರಾ) ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ ನಿವೇಶನಗಳನ್ನು ಹಂಚಿಕೆ ಮಾಡಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಈ ಬಗ್ಗೆ ಮಂಡ್ಯ ಜಿಲ್ಲಾಧಿಕಾರಿಗಳು ದಿನಾಂಕ 5–1–2011 ಹಾಗೂ 7–2–2011ರಂದು ನೀಡಿರುವ ತನಿಖಾ ವರದಿಗಳ ಬಗ್ಗೆ ಸರ್ಕಾರ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು;

ಈ) ನಿವೇಶನಗಳ ಅಕ್ರಮ ಹಂಚಿಕೆಗೆ ಕಾರಣವಾದ ಉಪಸಮಿತಿಯ ಸದಸ್ಯರುಗಳು, ಪ್ರಾಧಿಕಾರದ ನೌಕರರ ವರ್ಗ ಹಾಗೂ ಇನ್ನಿತರ ವಿರುದ್ಧ ಜಿಲ್ಲಾಧಿಕಾರಿಗಳ ವರದಿ ಅನ್ವಯ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಸರ್ಕಾರಕ್ಕೆ ಕಾನೂನಿನ ಅಡಚಣೆಗಳೇನು;

ಉ) ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ಅವ್ಯವಹಾರಗಳ ಬಗ್ಗೆ ಸರ್ಕಾರ ಉನ್ನತ ಮಟ್ಟದ ತನಿಖೆ ನಡೆಸಿ ತಪ್ಪಿತಸ್ಥರುಗಳಿಗೆ ಶಿಕ್ಷೆ ವಿಧಿಸಲಾಗುವುದೇ;

ಊ) ಕಳೆದ 10 ವರ್ಷಗಳಲ್ಲಿ ಮಂಡ್ಯ ಕೆರೆ ಅಂಗಳದಲ್ಲಿನ ವಿವೇಕಾನಂದ ನಗರ ಬಡಾವಣೆ ಅಭಿವೃದ್ಧಿಗೆ ತುಂಡು ಗುತ್ತಿಗೆ ನೆಪದಲ್ಲಿ ಕೋಟ್ಯಾಂತರ ರೂಪಾಯಿ ಹಣ ವ್ಯಯಿಸಲಾಗಿದ್ದು ಒಂದೇ ಕಾಮಗಾರಿಗೆ ಹಲವು ಬಾರಿ ಬಿಲ್ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ, ತುಂಡು ಗುತ್ತಿಗೆ ಕಾಮಗಾರಿ ಕೈಗೊಳ್ಳಲು ಸರ್ಕಾರದ ನಿಯಮಾವಳಿಗಳಲ್ಲಿ ಅವಕಾಶವಿದೆಯೇ;

ಋ) ಈ ಬಡಾವಣೆ ಅಭಿವೃದ್ಧಿ ಕಾಮಗಾರಿಗಳಲ್ಲಿ ಸರ್ಕಾರದ ಪಾರದರ್ಶಕ ನಿಯಮಗಳನ್ನು ಅನುಸರಿಸಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ, ಇಲ್ಲದಿದ್ದರೆ ಅಲ್ಲಿನ ಅಧಿಕಾರಿ ವರ್ಗದ ವಿರುದ್ಧ ಸರ್ಕಾರ ಯಾವ ಕಾನೂನು ಕ್ರಮಗಳನ್ನು ಕೈಗೊಂಡಿದೆ.

ಎ) ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಹಸಿರು ವಲಯ ಪ್ರದೇಶವನ್ನು ವಸತಿ ಹಾಗೂ ಇನ್ನಿತರೆ ಉದ್ದೇಶಗಳಿಗೆ ಇದುವರೆವಿಗೂ ಎಷ್ಟು ಎಕರೆ ಪ್ರದೇಶವನ್ನು ಅನ್ಯಕ್ರಾಂತ ಮಾಡಿ ಕೊಡಲಾಗಿದೆ, ಇದರಲ್ಲಿ ಸರ್ಕಾರದ ಅನುಮತಿ ಪಡೆದ ಪ್ರದೇಶವೆಷ್ಟು;

ಏ) ಪ್ರಾಧಿಕಾರದ ವತಿಯಿಂದ 2007ರಲ್ಲಿ ನಡೆಸಿದ ಬೇಡಿಕೆ ಸಮೀಕ್ಷೆ ಅನ್ವಯ ಒಟ್ಟು 29,880 ಮಂದಿ ನಿವೇಶನಗಳಿಗಾಗಿ ಅರ್ಜಿ ಸಲ್ಲಿಸಿದ್ದು ಇದುವರೆವಿಗೂ ಬಡಾವಣೆ ನಿರ್ಮಿಸಲು ಎಷ್ಟು ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)?

ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು)

ಅ) ಬಂದಿದೆ.

ಆ) ತಪ್ಪಿತಸ್ಥರಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದೆ. ಹಾಗೂ ದಿನಾಂಕ 8–9–2009ರ ಪ್ರಾಧಿಕಾರದ ಸಭೆಯ ನಿರ್ಣಯವನ್ನು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ ಕಲಂ 67(2)ರನ್ವಯ ಸದರಿ ಸಭೆಯ ನಡವಳಿಯನ್ನು ರದ್ದುಪಡಿಸುವ ಬಗ್ಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಲಾಗಿದೆ.

ಇ) ಈ ಬಗ್ಗೆ ಮೇಲಿನಂತೆ ಕ್ರಮವಹಿಸಲಾಗಿದೆ.

ಈ) ಸಂಬಂಧಿಸಿದ ಅಧಿಕಾರಿ ಹಾಗೂ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ಮತ್ತು ಕರ್ನಾಟಕ ನಾಗರೀಕ ನಡತೆ ನಿಯಮಗಳು 1966ರನ್ವಯ ಶಿಸ್ತು ಕ್ರಮ ಜರುಗಿಸಲು ಪರಿಶೀಲಿಸಲಾಗಿದ್ದು, ಸಂಬಂಧಿತ ಅಧಿಕಾರಿ/ನೌಕರರ ವಿರುದ್ಧ ಆರೋಪಗಳ ಪಟ್ಟಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ.

ಉ) ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ವಿಚಾರಣಾ ವರದಿ ಬಂದ ನಂತರ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಾಗುವುದು.

ಊ) ಬಂದಿರುವುದಿಲ್ಲ. ತುರ್ತು ಅವಶ್ಯಕತೆಯನ್ನು ಪರಿಗಣಿಸಿ, ಪ್ರಾಧಿಕಾರದ ಸಭೆಯ ನಿರ್ಣಯಗಳಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಲೋಇ 129 ಆರೂ 3–2002, ದಿನಾಂಕ 21–6–2002ರಂತೆ ಹಾಗೂ ಮಾರ್ಗ ಸೂಚಿಗಳನ್ವಯ ರೂ. 1.00 ಲಕ್ಷಗಳವರೆಗೆ ತುಂಡು ಗುತ್ತಿಗೆ ಕಾಮಗಾರಿಗಳನ್ನು ನಿರ್ವಹಿಸಿದೆ.

ಋ) ಪ್ರಾಧಿಕಾರ ಪ್ರಾರಂಭವಾದ 1988 ರಿಂದ ಪ್ರಾಧಿಕಾರದ ನಿರ್ಣಯಗಳು ಹಾಗೂ ಸರ್ಕಾರದಿಂದ ಕಾಲಕಾಲಕ್ಕೆ ಬಂದ ಆದೇಶಗಳನ್ವಯ ಮತ್ತು ಲೋಕೋಪಯೋಗಿ ಇಲಾಖೆಯ ನಿಯಮಗಳಂತೆ ಕಾಮಗಾರಿ

ನಿರ್ವಹಿಸಿರುತ್ತದೆ. ಕರ್ನಾಟಕ ಪಾರದರ್ಶಕ ಕಾಯ್ದೆ, ಚಾಲನೆಗೆ ಬಂದ ನಂತರ ಸದರಿ ಕಾಯ್ದೆಯಡಿ ತಹಲ್‌ವರೆವಿಗೆ ಕಾಮಗಾರಿಗಳನ್ನು ನಿರ್ವಹಿಸಿದೆ.

ಎ) ಕಂದಾಯ ಅಧಿನಿಯಮ 1964ರ ನಿಯಮ 102(ಬಿ)ರಲ್ಲಿ ಹಸಿರು ವಲಯವೆಂದು ಘೋಷಿಸಲು ಅವಕಾಶವಿದ್ದು, ಮಂಡ್ಯ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಹಸಿರು ವಲಯ ಇರುವುದಿಲ್ಲ ಬದಲಾಗಿ ವ್ಯವಸಾಯ ವಲಯ ಇರುತ್ತದೆ.

ಏ) ಪ್ರಾಧಿಕಾರದ ವತಿಯಿಂದ ಹೊಸ ಬಡಾವಣೆ ರಚನೆಗೆ ಸಂಬಂಧಪಟ್ಟ ಬೇಡಿಕೆ ಸಮೀಕ್ಷೆ ಮಾತ್ರ ಮಾಡಲಾಗಿದೆ. ಅರ್ಜಿದಾರರು ಹೊಸ ಬಡಾವಣೆಗಾಗಿ ತಮ್ಮ ಹೆಸರನ್ನು ನೊಂದಣಿ ಮಾಡಿಸಿರುತ್ತಾರೆಯೇ ಹೊರತು ನಿವೇಶನಗಳಿಗೆ ಅರ್ಜಿ ಸಲ್ಲಿಸಿರುವುದಿಲ್ಲ. ಅರ್ಜಿದಾರರ ಅರ್ಹತೆ ಸಮೀಕ್ಷೆ ಮಾಡುತ್ತಿದ್ದು, ಜಮೀನು ಭೂಸ್ವಾಧೀನ ಪಡಿಸಿಕೊಂಡಿರುವುದಿಲ್ಲ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿವೇಶನ ಹಂಚಿಕೆ

399 (878) ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2011–12ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ರಾಜ್ಯದ ಜನತೆಗೆ ನಿವೇಶನಗಳನ್ನು ಹಂಚಿಕೆ ಮಾಡುವ ಉದ್ದೇಶ ಸರ್ಕಾರ ಹೊಂದಿದೆಯೇ;

ಆ) ಹಾಗಿದ್ದಲ್ಲಿ, ನಿವೇಶನಗಳನ್ನು ಹಂಚಿಕೆ ಮಾಡಲು ಪ್ರಾಧಿಕಾರ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಅಭಿವೃದ್ಧಿಪಡಿಸಿದೆ (ವಿವರ ನೀಡುವುದು);

ಇ) ನಿವೇಶನ ಹಂಚಿಕೆ ಪ್ರಾಧಿಕಾರ ಕೈಗೊಳ್ಳಲಿರುವ ಕ್ರಮಗಳೇನು?

ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)

ಅ) ಹೌದು.

ಆ) 1) ಅರ್ಕಾವತಿ ಬಡಾವಣೆಗಾಗಿ 1289 ಎಕರೆ 31 ಗುಂಟೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡು ಅಭಿಯಂತರ ವಿಭಾಗಕ್ಕೆ ವಹಿಸಿಕೊಡಲಾಗಿದೆ.

2) ನಾಡಪ್ರಭು ಕೆಂಪೇಗೌಡ ಬಡಾವಣೆಗಾಗಿ 4043 ಎಕರೆ 27 ಗುಂಟೆ ಜಮೀನಿಗೆ ದಿನಾಂಕ 18–2–2010ರಂದು ಸಂಖ್ಯೆ: ಯುಡಿಡಿ 51 ಎಂಎನ್‌ಎಕ್ಸ್ 2010ರಲ್ಲಿ ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿದೆ.